/664945/2024

ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

TE-ADMI0EST(10)/38/2024-JD-DEPT TECH

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 23.08.2024

## ಹಿಂಬರಹ

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ 6 ನೇ ಎಐಸಿಟಿಇ ವೇತನ ಶ್ರೇಣಿಯಲ್ಲಿ ರೂ.8000 ಎ.ಜಿ.ಪಿ ರಿಂದ ರೂ.9000 ಕ್ಕೆ ವೃತ್ತಿ ಪದೋನ್ನತಿಯನ್ನು ಮಂಜೂರು ಮಾಡಿರುವ ಸರ್ಕಾರದ ಆದೇಶ ಸಂ: ಇಡಿ 104 ಡಿಟಿಇ 2024, ದಿ: 14/08/2024 ನ್ನು ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರ ಮುಖಾಂತರ ಸಂಬಂಧಪಟ್ಟ ಉಪನ್ಯಾಸಕರುಗಳಿಗೆ ಮಾಹಿತಿಗಾಗಿ ಹಾಗೂ ಪ್ರಾಂಶುಪಾಲರಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, ಎ&ಇ, ಬೆಂಗಳೂರು.
2. ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
3. ಸಂಬಂಧಪಟ್ಟ ಉಪನ್ಯಾಸಕರಿಗೆ (ಪ್ರಾಂಶುಪಾಲರ ಮುಖಾಂತರ).
4. ನೋಡಲ್ ಅಧಿಕಾರಿ, ಇ-ಆಡಳಿತ, ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಅಳವಡಿಸಲು)

ಪ್ರತಿ:-

1. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ), ಬಹುಮಹಡಿ ಕಟ್ಟಡ, ಬೆಂಗಳೂರು.
2. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಹೆಚ್ಚುವರಿ ಪ್ರತಿ ಕಡತಕ್ಕೆ

CamScanner

## ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯ್ಕೆ ಶ್ರೇಣಿ ಉಪನ್ಯಾಸಕರುಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ವೃತ್ತಿ ಪದೋನ್ನತಿ ನೀಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಇಡಿ 118 ಡಿಟಿಇ 2010, ದಿನಾಂಕ: 31.03.2011.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 167 ಡಿಟಿಇ 2017, ದಿನಾಂಕ: 10.11.2020.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಏಕ ಕಡತ ಸಂಖ್ಯೆ:DTE-ADMI0EST(10)/38/2024 (E-1453439).

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ 6ನೇ ಎಐಸಿಟಿಇ ವೇತನ ಶ್ರೇಣಿಗಳನ್ನು ದಿನಾಂಕ:01.04.2011 ರಿಂದ ಅನ್ವಯಿಸುವಂತೆ ವಿಸ್ತರಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಆದೇಶದಲ್ಲಿ ಸರ್ಕಾರಿ/ಖಾಸಗಿ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಯೋಜನೆ ಆಧಾರಿತ ವೃತ್ತಿ ಪದೋನ್ನತಿ (CAS) ಸೌಲಭ್ಯಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. All India Council for Technical Education (Career Advancement scheme for the teachers and other Academic staff in Technical Institutions) (Diploma) Regulations, 2012ರ ದಿನಾಂಕ:08.11.2012ರಲ್ಲಿನ ನಿಯಮಗಳಲ್ಲಿ ವಿಧಿಸಿರುವ ಎ.ಪಿ.ಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ:07.11.2015ರವರೆಗೆ ವಿನಾಯಿತಿ ನೀಡಿ ಕೆಲವು ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ವೃತ್ತಿ ಪದೋನ್ನತಿ (CAS) ಸೌಲಭ್ಯವನ್ನು ಮಂಜೂರು ಮಾಡಲು ಆದೇಶಿಸಲಾಗಿದೆ.

ಮೇಲೆ ಓದಲಾದ (3)ರ ಏಕ ಕಡತದ ಪ್ರಸ್ತಾವನೆಯಲ್ಲಿ, ಸರ್ಕಾರದ ಪತ್ರ ಸಂಖ್ಯೆ:ಇಡಿ 60 ಡಿಟಿಇ 2020 ದಿನಾಂಕ:26.04.2022ರಲ್ಲಿ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಮಂಜೂರು ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸಲು ಪ್ರತ್ಯೇಕ ಸ್ಥಾನೀಕರಣ ಸಮಿತಿಯನ್ನು ರಚಿಸುವ ಅಧಿಕಾರವನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ಪ್ರತ್ಯಾಯೋಜಿಸಲಾಗಿದೆ. ಅದರನ್ವಯ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ವಿಷಯ ತಜ್ಞರುಗಳನ್ನೊಳಗೊಂಡ ಸ್ಥಾನೀಕರಣ ಸಮಿತಿಯು ದಿನಾಂಕ:22.02.2024ರಂದು ಸಭೆ ಸೇರಿ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ 06 ಆಯ್ಕೆ ಶ್ರೇಣಿ ಉಪನ್ಯಾಸಕರುಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ (CAS) 6ನೇ ಎಐಸಿಟಿಇ ವೇತನ ಶ್ರೇಣಿ ರೂ.15600-39100ರಲ್ಲಿ ಎಜಿಪಿ ರೂ.8000/- ರಿಂದ ವೇತನ ಶ್ರೇಣಿ ರೂ.37400-67000ರಲ್ಲಿ ಎಜಿಪಿ ರೂ.9000/-ಕ್ಕೆ ಪದೋನ್ನತಿಯನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡಿರುತ್ತದೆ. ಅದರಂತೆ, ಸದರಿ ಆಯ್ಕೆ ಶ್ರೇಣಿ ಉಪನ್ಯಾಸಕರುಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್

...2

CamScanner

ಯೋಜನೆಯಡಿ ಮುಂದಿನ ಹಂತದ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಸೌಲಭ್ಯ ಮಂಜೂರು ಮಾಡುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ. ಸಂ | ಹೆಸರು, ಪದನಾಮ ಮತ್ತು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ |
|---|---|
| | **ಸಿವಿಲ್ ವಿಭಾಗ** |
| | ಕೆ. ವಿನುತ, ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್, ಮೈಸೂರು |
| | **ಇ&ಸಿ ವಿಭಾಗ** |
| | ವಿನೀತ ಎಂ, ಆಯ್ಕೆ ಶ್ರೇಣಿ ಉಪನ್ಯಾಸಕರು, ಎಸ್.ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು |
| | ಹೇಮಲತಾ ಎನ್, ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು |
| | **ಮೆಕ್ಯಾನಿಕಲ್ ಇಂಜಿನಿಯರಿಂಗ್ (ಹೆಚ್.ಪಿ.ಟಿ) ವಿಭಾಗ** |
| | ಡಾ ಪರಶುರಾಮ್ ಬೇಡರ್, ಆಯ್ಕೆ ಶ್ರೇಣಿ ಉಪನ್ಯಾಸಕರು,ಎಸ್.ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು |
| | **ವಿಜ್ಞಾನ ಮತ್ತು ಮಾನವಶಾಸ್ತ್ರ** |
| | ಡಾ ಅರಸ್‌ಕುಮಾರ್ ಎಂ.ಆರ್, ಆಯ್ಕೆ ಶ್ರೇಣಿ ಉಪನ್ಯಾಸಕರು, ಸಿ.ಪಿ.ಸಿ (ಸರ್ಕಾರಿ) ಪಾಲಿಟೆಕ್ನಿಕ್, ಮೈಸೂರು. |
| | **ವಿದ್ಯುತ್ ಇಂಜಿನಿಯರಿಂಗ್ ವಿಭಾಗ** |
| | ಜಬೀನಾ ಬಾನು ಎಂ ನದಾಫ, ಆಯ್ಕೆ ಶ್ರೇಣಿ ಉಪನ್ಯಾಸಕರು, ಶ್ರೀ ಚನ್ನಕೇಶವ ಸರ್ಕಾರಿ ಪಾಲಿಟೆಕ್ನಿಕ್, ಬಂಕಾಪುರ |

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಥಾನೀಕರಣ ಸಮಿತಿಯು ಶಿಫಾರಸ್ಸು ಮಾಡಿರುವ 06 ಆಯ್ಕೆ ಶ್ರೇಣಿ ಉಪನ್ಯಾಸಕರುಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ (CAS) 6ನೇ ಎಐಸಿಟಿಇ ವೇತನ ಶ್ರೇಣಿ ರೂ.15600-39100ರಲ್ಲಿ ಎಜಿಪಿ ರೂ.8000/- ರಿಂದ ವೇತನ ಶ್ರೇಣಿ ರೂ.37400-67000ರಲ್ಲಿ ಎಜಿಪಿ ರೂ.9000/-ರಲ್ಲಿ ವೃತ್ತಿ ಪದೋನ್ನತಿಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿದೆ.

ಅದರಂತೆ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 104 ಡಿಟಿಇ 2024**

**ಬೆಂಗಳೂರು, ದಿನಾಂಕ: 14ನೇ ಆಗಸ್ಟ್ 2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಆದೇಶದ **ಅನುಬಂಧ**ದಲ್ಲಿರುವ 06 ಆಯ್ಕೆ ಶ್ರೇಣಿ ಉಪನ್ಯಾಸಕರುಗಳಿಗೆ ಕೆಳಕಂಡ ಷರತ್ತಿಗೊಳಪಟ್ಟು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ (CAS)ಯಡಿ 6ನೇ ಎಐಸಿಟಿಇ ವೇತನ ಶ್ರೇಣಿ ರೂ.15600-39100 ಎಜಿಪಿ ರೂ.8000/- ರಿಂದ ವೇತನ ಶ್ರೇಣಿ ರೂ.37400-67000ರಲ್ಲಿ ಎಜಿಪಿ ರೂ.9000/-ಕ್ಕೆ ವೃತ್ತಿ ಪದೋನ್ನತಿ ಮಂಜೂರು ಮಾಡಿ ಆದೇಶಿಸಿದೆ.

**ಷರತ್ತುಗಳು:**

i. ಸದರಿಯವರು CASರಡಿ ವೃತ್ತಿ ಪದೋನ್ನತಿಗೆ ಅರ್ಹತೆ ಹೊಂದಿದ ದಿನಾಂಕದಿಂದ ಸೇವಾ ಜೇಷ್ಠತೆಯನ್ನು ಪರಿಗಣಿಸುವುದು ಹಾಗೂ ಸದರಿ ಪದೋನ್ನತಿಯ ಆರ್ಥಿಕ ಸೌಲಭ್ಯವನ್ನು

....3

CamScanner

ಭವಿಷ್ಯವರ್ತಿಯಾಗಿ ಅಂದರೆ, ಈ ಆದೇಶವನ್ನು ಹೊರಡಿಸಿದ ದಿನಾಂಕ:14.08.2024ರಿಂದ ಅನ್ವಯವಾಗುವಂತೆ ಜಾರಿಗೊಳಿಸುವುದು.

ii. ಸದರಿಯವರುಗಳಿಗೆ ವೇತನ ಶ್ರೇಣಿಯನ್ನು 7ನೇ ಎಐಸಿಟಿಇ ಪರಿಷ್ಕೃತ ವೇತನ ಶ್ರೇಣಿಯಡಿ ಸಂವಾದಿಯಾಗಿ ನಿಗದಿಪಡಿಸಲು ಅಗತ್ಯ ಕ್ರಮವಹಿಸುವುದು.

iii. 2010 ಮತ್ತು 2012ರ ಎಐಸಿಟಿಇ ರೆಗ್ಯುಲೇಷನ್‌ಗಳನ್ವಯ ಎ.ಜಿ.ಪಿ ಮಂಜೂರಾತಿಯು ಸರ್ಕಾರದ ಮಾರ್ಗಸೂಚಿ/ ಆದೇಶಗಳಲ್ಲಿನ ನಿಬಂಧನೆಗೊಳಪಟ್ಟಿರುತ್ತದೆ.

iv. ಎ.ಜಿ.ಪಿ ಮಂಜೂರಾತಿಯು ಎಐಸಿಟಿಇ/ಯುಜಿಸಿ/ಸರ್ಕಾರ/ಇಲಾಖೆ ಕಾಲಕಾಲಕ್ಕೆ ಹೊರಡಿಸಿರುವ ಆದೇಶ/ ಸುತ್ತೋಲೆ/ ಪತ್ರಗಳಲ್ಲಿ ನಿಗದಿಪಡಿಸಿರುವ ಷರತ್ತು/ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

v. ಸದರಿ ಆಯ್ಕೆ ಶ್ರೇಣಿ ಉಪನ್ಯಾಸಕರುಗಳು ಸಿಎಎಸ್ ಮುಂಬಡ್ತಿಗೆ ಎಲ್ಲಾ ರೀತಿಯಲ್ಲೂ ಅರ್ಹತೆಯನ್ನು ಹೊಂದಿರುವ ಬಗ್ಗೆ ಸ್ಥಾನೀಕರಣ ಆಯ್ಕೆ ಸಮಿತಿಯು ಮಾಡಿರುವ ಶಿಫಾರಸ್ಸಿನಂತೆ ಪರಿಗಣಿಸಲಾಗಿದೆ.

vi. ಸದರಿ ಬೋಧಕರುಗಳ ಪ್ರಸ್ತಾವನೆಯಲ್ಲಿ ಯಾವುದೇ ತಪ್ಪು ಮಾಹಿತಿಯನ್ನು ಒದಗಿಸಿರುವುದು ಕಂಡು ಬಂದಲ್ಲಿ ಸದರಿಯವರುಗಳ ಎ.ಜಿ.ಪಿ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆ ನೀಡದೇ ಹಿಂಪಡೆಯಲಾಗುವುದು ಹಾಗೂ ತಪ್ಪು ಮಾಹಿತಿ ಒದಗಿಸಿದವರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

vii. ಈ ಆದೇಶದನ್ವಯ ಮಂಜೂರು ಮಾಡಲಾಗುವ ಎ.ಜಿ.ಪಿ. ಸೌಲಭ್ಯವನ್ನು ಸ್ಥಳೀಯ/ ಮಹಾಲೇಖಪಾಲರ ಲೆಕ್ಕಪರಿಶೋಧನೆಗೆ ಒಳಪಡಿಸಿದಾಗ ಯಾವುದೇ ಅಸಂಗತಗಳು ಕಂಡುಬಂದಲ್ಲಿ ಮರು ಪರಿಶೀಲಿಸುವ ಮತ್ತು ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

viii. ಈ ಆದೇಶದಂತೆ ನೀಡಲಾದ ವೃತ್ತಿ ಪದೋನ್ನತಿಯನ್ನು ಸೇವಾ ಜೇಷ್ಠತೆಗೆ ಪರಿಗಣಿಸಲು ಅವಕಾಶವಿರುವುದಿಲ್ಲ.

ix. ಎಜಿಪಿ ಮಂಜೂರಾತಿ ವಿವರಗಳನ್ನು ಸದರಿ ಬೋಧಕ ಸಿಬ್ಬಂದಿಗಳ ಸೇವಾ ಪುಸ್ತಕದಲ್ಲಿ ನಮೂದಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:FD 51 Exp-8/2023, ದಿನಾಂಕ:03.03.2023ರಲ್ಲಿ ನೀಡಿರುವ ಅಭಿಪ್ರಾಯದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

14/8/2024

(ಮಹಾಂತೆಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ&ಇ), ಬೆಂಗಳೂರು.

...4

CamScanner

2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.

3. ಸಂಬಂಧಪಟ್ಟ ಉಪನ್ಯಾಸಕರುಗಳಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆರವರ ಕಛೇರಿಯ ಮೂಲಕ)

**ಪ್ರತಿ:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

CamScanner

## ಅನುಬಂಧ

**(ಸರ್ಕಾರದ ಆದೇಶ ಸಂಖ್ಯೆ:ಇಡಿ 104 ಡಿಟಿಇ 2024, ದಿನಾಂಕ:14.08.2024)**

| ಕ್ರ. ಸಂ | ಹೆಸರು, ಪದನಾಮ ಮತ್ತು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ | ಸೇವೆಗೆ ಸೇರಿದ ದಿನಾಂಕ | ಎಜಿಪಿ ರೂ.8000 ಮಂಜೂರು ಮಾಡಲಾದ ದಿನಾಂಕ | ವಿದ್ಯಾರ್ಹತೆ ಮತ್ತು ಎಲ್ಲಾ ಮಾನದಂಡಗಳನ್ನು ಪೂರೈಸಿದ ದಿನಾಂಕ | (ಎ.ಜಿ.ಪಿ ರೂ.8000 ರಿಂದ 9000) ಪದೋನ್ನತಿಗೆ ಅರ್ಹತಾ ದಿನಾಂಕ |
|---|---|---|---|---|---|
| | **ಸಿವಿಲ್ ವಿಭಾಗ** | | | | |
| 1. | ಕೆ. ವಿನುತ<br>ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್, ಮೈಸೂರು. | 28.11.2002 | 01.03.2014 | 01.03.2017 | 01.03.2017 |
| | **ಇ&ಸಿ ವಿಭಾಗ** | | | | |
| 2. | ವಿನೀತ ಎಂ<br>ಆಯ್ಕೆ ಶ್ರೇಣಿ ಉಪನ್ಯಾಸಕರು, ಎಸ್.ಜೆ (ಸಂಜೆ) ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು. | 19.04.2002 | 19.04.2013 | 19.04.2016 | 19.04.2016 |
| 3. | ಹೇಮಲತ ಎನ್<br>ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು. | 19.04.2002 | 19.04.2013 | 19.04.2016 | 19.04.2016 |
| | **ಮೆಕ್ಯಾನಿಕಲ್ ಇಂಜಿನಿಯರಿಂಗ್ (ಹೆಚ್.ಪಿ.ಟಿ) ವಿಭಾಗ** | | | | |
| 4. | ಡಾ ಪರಶುರಾಮ್ ಬೇಡರ್<br>ಆಯ್ಕೆ ಶ್ರೇಣಿ ಉಪನ್ಯಾಸಕರು, ಎಸ್.ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು. | 04.01.2003 | 15.03.2013 | 28.10.2017 | 28.10.2017 |
| | **ವಿಜ್ಞಾನ ಮತ್ತು ಮಾನವಶಾಸ್ತ್ರ ವಿಭಾಗ** | | | | |
| 5. | ಡಾ ಅರಸ್‌ಕುಮಾರ್ ಎಂ.ಆರ್<br>ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್, ಮೈಸೂರು. | 25.11.2002 | 25.11.2013 | 25.11.2016 | 25.11.2016 |
| | **ವಿದ್ಯುತ್ ಇಂಜಿನಿಯರಿಂಗ್ ವಿಭಾಗ** | | | | |
| 6. | ಜಬೀನಬಾನು ಎಂ ನದಾಫ<br>ಆಯ್ಕೆ ಶ್ರೇಣಿ ಉಪನ್ಯಾಸಕರು, ಶ್ರೀ ಚನ್ನಕೇಶವ ಸರ್ಕಾರಿ ಪಾಲಿಟೆಕ್ನಿಕ್, ಬಂಕಾಪುರ. | 02.12.2002 | 02.12.2013 | 02.12.2016 | 02.12.2016 |

14/8/2024

(ಮಹಾಂತೇಪ್ಪ ಎಸ್.ತುರಕನೂರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ ಶಿಕ್ಷಣ)

CamScanner